**ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು, ಹುಣಸೂರು ಪೀಠ.**

**SC No**.208/2022

**PW**. 3

**CW**. 6

**ಸಾಕ್ಷಿಯ ಹೆಸರು –ರವಿ ಆರ್ ಬಿ**

**ತಂದೆಯ ಹೆಸರು –ಲೇ ಬಸವೇಗೌಡ**

**ವಯಸ್ಸು –41 ವರ್ಷಗಳು**

ದಿನಾಂಕ 17–09–2025 ರಂದು ಪ್ರಮಾಣವಚನ ಬೋಧಿಸಲಾಯಿತು.

**ಉದ್ಯೋಗ –ವ್ಯವಸಾಯ**

**ವಾಸಸ್ಥಳ –ರಂಗಯ್ಯನಕೊಪ್ಪಲು , ಹುಣಸೂರು ತಾಃ**

**ಮುಖ್ಯ ವಿಚಾರಣೆಃ– ಸರ್ಕಾರಿ ಅಭಿಯೋಜಕರಿಂದಃ–**

ಚಾಸಾ–1 ಹಾಗೂ ಆರೋಪಿಯನ್ನು ನಾನು ಈ ಹಿಂದೆ ನೋಡಿಲ್ಲ. ಈಗ್ಗೆ 5 ವರ್ಷಗಳ ಹಿಂದೆ ಪೊಲೀಸರು ಪೊಲೀಸ್ ಠಾಣೆಯಲ್ಲಿ ಒಂದು ಪಂಚನಾಮೆಗೆ ನನ್ನ ಸಹಿ ಪಡೆದರು. ಅದನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ–2 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ–2(ಬಿ) ಎಂದು ಗುರುತಿಸಲಾಯಿತು. ಆರೋಪಿ ಹೇಳಿಕೆ ಮೇರೆಗೆ ಪೊಲೀಸರು ನನ್ನ ಸಮಕ್ಷಮ ಪಂಚನಾಮೆ ಮಾಡಿಲ್ಲ , ಹಾಗೂ ವಸ್ತುಗಳನ್ನು ಜಪ್ತಿ ಮಾಡಿಲ್ಲ.

**(ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೇಳಿದ್ದು ಸಾಕ್ಷಿಯ ಸಾಕ್ಷ್ಯ ಮತ್ತು ಇತರೆ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

**SC No.208/2022**
**PW.3**

**ಪಾಟೀಸವಾಲುಃ– ಸರ್ಕಾರಿ ಅಭಿಯೋಜಕರಿಂದಃ–**

ದಿಃ 24–06–2020 ರಂದು ಆರೋಪಿ ದೊಡ್ಡನಾಯಕ ಹೇಳಿದ ಹೇಳಿಕೆ ಮೇರೆಗೆ ಆರೋಪಿ ನಮ್ಮನ್ನು ಮತ್ತು ಪೊಲೀಸರನ್ನು ಬಿಳಿಕೆರೆ ಗ್ರಾಮಕ್ಕೆ ಮನೆಯ ಬಳಿ ಕರೆದುಕೊಂಡು ಹೋಗಿ, ಈ ಪ್ರಕರಣಕ್ಕೆ ಬಳಸಿದ ಒಂದು ಚಾಕುವನ್ನು ಆತನ ಮನೆಯಿಂದ ಹಾಜರು ಮಾಡಿದ ಚಾಕುವನ್ನು ಪೊಲೀತರು ಜಪ್ತಿ ಮಾಡಿ ಬೆಳಗ್ಗೆ 11.45 ರಿಂದ 12.30 ರವರೆಗೆ ನಮ್ಮ ಸಮಕ್ಷಮ ಪಂಚನಾಮೆ ಮಾಡಿ ಓದಿ ಹೇಳಿ ಸಹಿ ಪಡೆದರು ಎಂದರೆ ಸರಿಯಲ್ಲ. ಸದರಿ ಚಾಕುವನ್ನು ಈ ದಿನ ನ್ಯಾಯಾಲಯದ ಮುಂದೆ ನೋಡುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ–2 ರ ಬಗ್ಗೆ ಮತ್ತು ಚಾಕು ಬಗ್ಗೆ ಮಾಹಿತಿ ಇದ್ದರೂ ಕೂಡ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ– ಆರೋಪಿ ಪರ ಶ್ರೀ ಸಿ ಎಸ್ ವಕೀಲರಿಂದಃ–**

ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಓ ಹೇ ಕೇ ಸರಿ ಇದೆ ಎಂದು ಒಪ್ಪಿದ ಮೇರೆಗೆ,

ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು, ಹುಣಸೂರು ಪೀಠ.